ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರದ ಹಂಲಿಮನೆ ಸೀತಾರಾಮ ಶಾಸ್ತ್ರಿ ಪ್ರತಿಷ್ಠಾನದ ಬಗ್ಗೆ

೧೭೬೮. ಶ್ರೀ ಗೋಪಾಲ ಮುಕಂದ ಕಾನಡೆ (ಸಿರ್ಸಿ).—ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಉತ್ತರ ಕನ್ನಡ ಸಿದ್ದಾಪುರದಲ್ಲಿ ಹುಲಿಮನೆ ಸೀತಾರಾಮ ಶಾಸ್ತ್ರಿ ಪ್ರತಿಷ್ಠಾನದ ಹೆಸರಿನ ಸಂಸ್ಥೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಸದರಿ ಸಂಸ್ಥೆಗೆ ಸರ್ಕಾರದವರು ಬಿಡುಗಡೆ ಮಾಡಿರುವ ಹಣವೆಷ್ಟು ?

ಇ) ಸದರಿ ಸಂಸ್ಥೆಯಲ್ಲಿ ನೀಡಲಾಗುತ್ತಿರುವ ಶಿಕ್ಷಣಗಳಾವುವು ? ಇದುವರೆವಿಗೆ ಶಿಕ್ಷಣ ಹೊಂದಿದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ?

(ಶಿಕ್ಷಣಾವಾರು ವಿವರ ನೀಡುವುದು).

ಶ್ರೀ ಜೀವರಾಜ ಆಳ್ವ (ಉನ್ನತ ಶಿಕ್ಷಣ ಮಂತ್ರಿಗಳು).—

ಅ) ಬಂದಿದೆ.

ಆ) ರೂ. ೨೬,೦೦೦–೦೦.

ಇ) ೧. ಅಭಿನಯ, ೨. ರಂಗ ಸಜ್ಜಿಕೆ, ೩. ವರ್ಣಾಲಂಕಾರ, ೪. ನಾಟಕೀಯ ಸಂಗೀತ (ರಂಗ ಗೀತೆ), ೫, ನಾಟಕೀಯ ಸಾಹಿತ್ಯ, ೬. ಬೆಳಕಿನ ಸಂಯೋಜನೆ.

ಇವುಗಳಲ್ಲಿ ಶಿಕ್ಷಣ ನೀಡಲಾಗುತ್ತಿದೆ. ಇದು ಮೊದಲ ತಂಡವಿದ್ದು, ಈಗ ಒಟ್ಟು ೧೫ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ.

ಶಿಕ್ಷಕರ ವರ್ಗಾವಣೆ ಕುರಿತು

೧೫೨೯. ಶ್ರೀ ವೇದಾಂತ ಹೆಬ್ಬಿಗೆ (ಕೃಷ್ಣರಾಜ).—ಮಾನ್ಯ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮೈಸೂರು ನಗರದ ಸರ್ಕಾರೀ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಾಲೆಗಳಲ್ಲಿ ಮೂರು ವರ್ಷಕ್ಕೆ ಮೇಲ್ಪಟ್ಟು ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ?

ಆ) ಇವರುಗಳಲ್ಲಿ ಪುರುಷ ಹಾಗೂ ಮಹಿಳಾ ಶಿಕ್ಷಕರ ಸಂಖ್ಯೆ ಎಷ್ಟು ?

ಶ್ರೀ ಬಿ. ಸೋಮಶೇಖರ್ (ಪ್ರಾಥಮಿಕ ಮತ್ತು ಪೌಢ ಶಿಕ್ಷಣ ರಾಜ್ಯ ಸಚಿವರು).—

ಅ) ೪೬೫ ಜನ ಶಿಕ್ಷಕರು.

ಆ) ಮಹಿಳಾ ಶಿಕ್ಷಕರು ೩೨೯.
ಪುರುಷ ಶಿಕ್ಷಕರು ೧೩೬.

ಕೃಷ್ಣ ಮೇಲ್ದಂಡೆ ಯೋಜನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿ: ನೌಕರರ ಸಂಖ್ಯೆ: ಅವರುಗಳಿಗೆ ಮಾಸಿಕ ವೇತನ ಭತ್ಯೆಗಳಿಗಾಗುವ ವೆಚ್ಚ

೧೬೪೩. ಶ್ರೀ ಬಿ. ಲಕ್ಕಪ್ಪ (ಚಿಕ್ಕನಾಯಕನ ಹಳ್ಳಿ).—ಮಾನ್ಯ ನಗರಾಭಿವೃದ್ಧಿ ಹಾಗೂ ಬೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕೃಷ್ಣ ಮೇಲ್ದಂಡೆ ಯೋಜನೆಯಲ್ಲಿ ಕೆಲಸ ಮಾಡುತ್ತಿರುವ ಮುಖ್ಯ ಇಂಜಿನಿಯರ್, ಸೂಪರಿಂಟೆಂಡಿಂಗ್ ಇಂಜಿನಿಯರ್, ಎಕ್ಸಿಕ್ಯೂಟಿವ್ ಇಂಜಿನಿಯರ್, ಸಹಾಯ ಎಕ್ಸಿಕ್ಯೂಟಿವ್ ಇಂಜಿನಿಯರ್, ಜೂನಿಯರ್ ಇಂಜಿನಿಯರ್ ಮತ್ತು ಇನ್ನಿತರ ಸಿಬ್ಬಂದಿಗಳ ಒಟ್ಟು ಸಂಖ್ಯೆ ಎಷ್ಟು ?